# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/299/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 16. 3. 24.

## ಕಛೇರಿ ಆದೇಶ

ವಿಷಯ: ಶ್ರೀ ವಾಸು ಪಿ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ), ಜಲಸಂಪನ್ಮೂಲ ಇಲಾಖೆ ರವರ ಅಧಿಸೂಚನೆ ಸಂಖ್ಯೆ: ಜಸಂಇ 09 ಸೇಸಎ 2023, ದಿನಾಂಕ: 14-02-2024
2) ಶ್ರೀ ವಾಸು ಪಿ, ಸಹಾಯಕ ಅಭಿಯಂತರರು ರವರ ಮನವಿ ದಿನಾಂಕ: 15-03-2024
3) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ವಾಸು ಪಿ, ಸಹಾಯಕ ಅಭಿಯಂತರರು, ಜಲಸಂಪನ್ಮೂಲ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಟಿ.ಇ.ಸಿ) ಹಾಗೂ ಮುಖ್ಯ ಅಭಿಯಂತರರು (ಮಹದೇವಪುರ) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರಿಗೆ ಉಲ್ಲೇಖ-(1)ರ ಅಧಿಸೂಚನೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಪದೋನ್ನತಿ ನೀಡಿ, ಜಲ ಸಂಪನ್ಮೂಲ ಇಲಾಖೆಯಲ್ಲಿಯೇ ಕಾರ್ಯನಿರ್ವಹಿಸಲು ಆದೇಶಿಸಿದ್ದು, ಈ ಸಂಬಂಧ ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಮನವಿ ಸಲ್ಲಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವ ಮೇರೆಗೆ, ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ದಿನಾಂಕ: 16-03-2024ರ ಅಪರಾಹ್ನದಿಂದ ಅನ್ವಯವಾಗುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ತ್‌ಕಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(3)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

16/3

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

16/3/2024 16/3/24

ಪ್ರತಿಯನ್ನು:

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) / (ಮಹದೇವಪುರ) ವಿಭಾಗ ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಟಿ.ಇ.ಸಿ) ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ಮಹದೇವಪುರ/ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.